ಬಾಪೂಜಿ ವಿದ್ಯಾ ಸಂಸ್ಥೆ (ರಿ)

# ಶ್ರೀಮತಿ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಆಂಗ್ಲ ಮಾಧ್ಯಮ ವಸತಿಯುತ ಶಾಲೆ ತೋಳಹುಣಸೆ ದಾವಣಗೆರೆ -7

---

## ನಾಗ ಪಂಚಮಿ ಸಂಭ್ರಮಾಚರಣೆ.

**ಶೀರ್ಷಿಕೆ:** ಪಿ.ಎಸ್.ಎಸ್.ಇ.ಎಂ.ಆರ್ ಶಾಲೆಯಲ್ಲಿ ನಾಗ ಪಂಚಮಿ ಹಬ್ಬದ ಸಡಗರದ ಸಂಭ್ರಮಾಚರಣೆ.

- **ಮುನ್ನುಡಿ :** ಶ್ರಾವಣದಲ್ಲಿ ಬರುವ ಹಬ್ಬಗಳಿಗೆ ಮುನ್ನುಡಿ ಬರೆವಂತ ವಿಶೇಷ ಹಬ್ಬ ನಾಗರ ಪಂಚಮಿ. ಶ್ರಾವಣ ಮಾಸದ ಶುಕ್ಲ ಪಕ್ಷದ ಪಂಚಮಿ ದಿನ ನಾಗರ ಪಂಚಮಿ ಹಬ್ಬವನ್ನು ಆಚರಿಸಲಾಗುತ್ತದೆ. ನಾಗರಪಂಚಮಿ ಎಂದರೆ ಒಡಹುಟ್ಟಿದವರ ಹಬ್ಬ. ಹೆಣ್ಣು ಮಕ್ಕಳ ಹಬ್ಬ. ನಾಗಪ್ಪನಿಗೆ ಹಾಲು ಎರೆದು ಆಚರಿಸುವ ಹಬ್ಬವಾಗಿದೆ. ಈ ಹಬ್ಬಕ್ಕೆ ಗರುಡ ಪಂಚಮಿ ಎಂಬ ಹೆಸರು ಕೂಡ ಇದೆ. ನಾಗರ ಪಂಚಮಿಯಂದು ಶ್ರದ್ಧಾ ಭಕ್ತಿಯಿಂದ ನಾಗರಕಲ್ಲಿಗೆ ಅಥವಾ ಹುತ್ತಗಳಿಗೆ ಹಾಲೆರೆದು ಪೂಜೆ ಸಲ್ಲಿಸಲಾಗುತ್ತದೆ. ನಾಗಪ್ಪನಿಗೆ ಹಲವು ವಿಧದ ಉಂಡೆಗಳು, ಕರಿ ಎಳ್ಳಿನಿಂದ ಮಾಡಿದ ಉಂಡೆ, ಚಿಗಳಿ ತಂಬಿಟ್ಟು, ಹಸಿ ಅಕ್ಕಿ ಮತ್ತ ಬೆಲ್ಲ ಬೆರೆಸಿ ಮಾಡಿದ ತಂಬಿಟ್ಟಿನ ನೈವೇದ್ಯವನ್ನು ಮಾಡಲಾಗುತ್ತದೆ.

ಅಣ್ಣ ತಂಗಿಯ ಪ್ರೀತಿ ಸಾರುವಂತಹ ಈ ಹಬ್ಬದಲ್ಲಿ ಅಕ್ಕ ತಂಗಿಯರು ಅಣ್ಣ ತಮ್ಮಂದಿರ ಆಯಸ್ಸು, ಆರೋಗ್ಯ ಮತ್ತು ಸಕಲ ಸುಖಗಳನ್ನು ನೀಡುವಂತೆ ದೇವರಲ್ಲಿ ಪ್ರಾರ್ಥಿಸಿಕೊಳ್ಳವ ದಿನವಾಗಿದೆ. ಹುತ್ತಕ್ಕೆ ಹಾಲು ಎರೆದು, ಹುತ್ತದ ಮಣ್ಣನ್ನು ಹೊಕ್ಕಳು ಅಥವಾ ಬೆನ್ನಿಗೆ ಹಚ್ಚಿ ಒಳ್ಳೆದಾಗಲಿ ಎಂದು ಹಾರೈಸುತ್ತಾರೆ. ನಾಗದೇವತೆಗಳಿಗೆ ಅನುಗ್ರಹ ಮತ್ತು ನಿಗ್ರಹ ಮಾಡುವಂತಹ ಸಾಮರ್ಥ್ಯ ಇರುವುದರಿಂದ ಸರ್ಪ ಪೂಜೆಗೆ ವಿಶೇಷವಾದ ಮಾನ್ಯತೆ ನೀಡಲಾಗಿದೆ.

ಇನ್ನು ಉತ್ತರ ಕರ್ನಾಟಕದಲ್ಲಿ ಈ ಹಬ್ಬ ಮತ್ತಷ್ಟು ವಿಶಿಷ್ಟವಾಗಿರುತ್ತದೆ. ಈ ಹಬ್ಬದಲ್ಲಿ ಮನೆಗಳಲ್ಲಿ ಮತ್ತು ಊರಿನಲ್ಲಿ ಜೋಕಾಲಿ ಕಟ್ಟಿ ಹಾಡುವಂತಹ ವಿಶಿಷ್ಟ ಪದ್ಧತಿ ಇದೆ. ಹಿರಿಯರು ಕಿರಿಯರು ಭೇದವಿಲ್ಲದೇ ಜೋಕಾಲಿ ಹಾಡುತ್ತಾರೆ. ನಾಗರಪಂಚಮಿ ಹಬ್ಬ ಉತ್ತರ ಕರ್ನಾಟಕ ಭಾಗದಲ್ಲಿ ಜೋಕಾಲಿ ಹಬ್ಬವೆಂದು ಪ್ರಸಿದ್ಧಿ ಪಡೆದಿದೆ. ನಾಗ ಪೂಜೆ ಮಾಡಿ ಸುಬ್ರಮಣ್ಯನನ್ನು ಆರಾಧನೆ ಮಾಡಿದರೆ ನಮ್ಮ ಇಡೀ ಕುಟುಂಬವನ್ನು ನಾಗಪ್ಪ ಕಾಯ್ತಾನೆ ಎಂಬ ನಂಬಿಕೆ ಇದೆ.



❖ ಸಂಸ್ಕೃತಿಯನ್ನು ಬಿಂಬಿಸುವ  ಶ್ಲೋಕ ಮತ್ತು ನುಡಿಮುತ್ತುಗಳು :

"ಹಿಂದಿನ ಇತಿಹಾಸ, ಮೂಲ ಮತ್ತು ಸಂಸ್ಕೃತಿಯ ಅರಿವಿಲ್ಲದ ಜನರು ಬೇರುಗಳಿಲ್ಲದ ಮರದಂತೆ".-ಮಾರ್ಕಸ್ ಗಾರ್ವೆ

ಯುಕ್ತ -5ನೆಯ ತರಗತಿ

"ರಾಷ್ಟ್ರದ ಸಂಸ್ಕೃತಿಯು ಆ ರಾಷ್ಟ್ರದ ಜನರ ಹೃದಯದಲ್ಲಿ ಮತ್ತು ಆತ್ಮದಲ್ಲಿ ನೆಲೆಸಿದೆ." - **ಮಹಾತ್ಮ ಗಾಂಧಿ**

ದಿವ್ಯಶ್ರೀ - 4ನೆಯ ತರಗತಿ

पृथिव्यां त्रीणि रत्नानि जलमन्नं सुभाषितम् ।
मूढै: पाषाणखण्डेषु रत्नसंज्ञा प्रदीयते ॥

English Meaning: -
There are only three gems on earth – water, food and good words.
But foolish people consider, pieces of stones as gems.

If we do not want to be fooled, then only good things have to be considered, as gems. only then we will get happiness and peace in life.






## ❖ ನಾಗರ ಪಂಚಮಿಯ ಆಚರಣೆಯ ಮಹತ್.

**(ತರುಣ್ ಎಸ್ ಪಾಟೀಲ್)**

ಹಿಂದೂ ಪಂಚಾಂಗದ ಪ್ರಕಾರ ಎಲ್ಲ ಹಬ್ಬಗಳಿಗೆ ಮುನ್ನುಡಿಯಂತೆ ಬರುವ ಹಬ್ಬ ಎಂದರೆ ಅದು ನಾಗರ ಪಂಚಮಿ. ಶ್ರಾವಣ ಶುದ್ಧ ಪಂಚಮಿಯಿಂದ ಆಚರಿಸಲ್ಪಡುವ ಈ ಹಬ್ಬ ಮುಂದೆ ಬರಲಿರುವ ಗಣೇಶ ಚತುರ್ಥಿ, ಕೃಷ್ಣಾಷ್ಟಮಿ, ನವರಾತ್ರಿ, ಊರಿನ ಜಾತ್ರೆಗೆ, ಎಲ್ಲ ಶುಭ ಆಚರಣೆಗಳಿಗೆ ಮೊದಲ ಮೆಟ್ಟಿಲು. ನಾಗರ ಪಂಚಮಿ ಸಂಬಂಧಿಸಿದಂತೆ ಜನಪದ ಮತ್ತು ಪುರಾಣದಲ್ಲಿ ಹಲವು ಕಥೆಗಳಿವೆ. ಜನಪದ ಕಥೆಯ  ಪ್ರಕಾರ ನಾಗರ ಪಂಚಮಿ ಬರುವುದು ಮುಂಗಾರಿನ  ರಭಸದ ದಿನಗಳ ಮಧ್ಯೆ. ಈ ಕಾಲದ ಕೃಷಿ

ಚಟುವಟಿಕೆಗಳು ಒಂದು ಹಂತ ತಲುಪಿರುತ್ತವೆ. ಈ ಕಾಲದಲ್ಲಿ ಕೀಟ, ಮಿಡತೆಗಳ ಹಾವಳಿ ಅಧಿಕ. ಅಷ್ಟೇ ಅಲ್ಲದೆ ಫಸಲು ತಿನ್ನಲು ಬರುವ ಇಲಿಗಳಿಗೂ ಕೊರತೆಯಿಲ್ಲ. ಇವೆಲ್ಲದರಿಂದ ರೈತನ ಫಸಲನ್ನು ಕಾಪಾಡುವುದು ಹಾವುಗಳು. ಇಲಿ, ಕಪ್ಪೆಗಳ ಅತಿಯಾದ ಹಾವಳಿಯನ್ನು ನಿಯಂತ್ರಿಸುವ ನಾಗರನಿಗೆ ಪುಟ್ಟದೊಂದು ಧನ್ಯವಾದ ಹೇಳಲು ನಡೆಸುವ ಪೂಜೆಯೇ ನಾಗರ ಪಂಚಮಿ.

ಸ್ಕಂದ ಪುರಾಣದಲ್ಲಿ ನಾಗರ ಪಂಚಮಿಯ ಬಗ್ಗೆ ಕೆಲ ಮಾಹಿತಿಗಳು ಸಿಗುತ್ತದೆ. ಶ್ರೀಕೃಷ್ಣನ ಮಗನಾದ ಸಾಂಬನು ಶಿವಸುತ ಸುಬ್ರಹ್ಮಣ್ಯನಲ್ಲಿ ನಾಗರ ಪಂಚಮಿಯನ್ನು ಯಾಕೆ ಆಚರಿಸಲಾಗುತ್ತದೆ ಎಂದು ಪ್ರಶ್ನೆ ಕೇಳಿದಾಗ ಆತನ ಒಂದು ಕಥೆಯನ್ನು ಹೇಳುತ್ತಾನೆ. ಹಿಂದೆ ದೇವಶರ್ಮ ಎಂಬ ಬ್ರಾಹ್ಮಣನೊಬ್ಬನಿದ್ದನು. ಆತನಿಗೆ 8 ಗಂಡು ಮಕ್ಕಳು ಹಾಗೂ ಒಬ್ಬಾಕೆ ಹೆಣ್ಣು ಮಗಳಿದ್ದಳು. ಒಂದು ದಿನ ಗರುಡನಿಂದ ಹೆದರಿಸಲ್ಪಟ್ಟ ನಾಗರವೊಂದು ಈ ಕನ್ನಿಕೆಯ ಬಳಿ ಬಂದು ಆಶ್ರಯವನ್ನು ಕೇಳುತ್ತದೆ. ಭಕ್ತಿಯಿಂದ ಕನ್ನಿಕೆ ಆ ನಾಗನಿಗೆ ಹಾಲು, ಫಲಗಳನ್ನು ಇಟ್ಟು ಭಕ್ತಿಯಿಂದ ಸಾಕುತ್ತಾಳೆ. ಇದಕ್ಕೆ ಪ್ರತಿಯಾಗಿ ಆ ನಾಗವು ದಿನಂಪ್ರತಿ ಆಕೆಗೆ ಒಂದು ತೊಲೆ ಚಿನ್ನವನ್ನು ನೀಡುತ್ತಿರುತ್ತದೆ. ಹೀಗಿರಲು ಒಂದು ದಿನ ಎಂಟು ಗಂಡು ಮಕ್ಕಳಲ್ಲಿ ಒಬ್ಬನು ತುಂಬಾ ಬಂಗಾರ ಬೇಕೆಂದು ನಾಗನನ್ನು ಪೀಡಿಸಿ, ಕಾಲಿನಿಂದ ಒದೆಯುತ್ತಾನೆ. ಕೋಪಗೊಂಡ ನಾಗರ ಹಾವು ಅವನ್ನು ಸೇರಿದಂತೆ ಇತರ ಏಳು ಜನರನ್ನು ಕೊಂದು ಹೊರಟು ಹೋಗುತ್ತದೆ. ತನ್ನ ಅಣ್ಣಂದಿರ ಸಾವಿಗೆ ತಾನೇ ಕಾರಣನಾದೇ ಎಂದು ಆ ಕನ್ನಿಕೆ, ದೇವರ ಇದಿರಿನಲ್ಲಿ ಶಿರಚ್ಛೇದನಕ್ಕೆ ಮುಂದಾದಾಗ, ನಾರಾಯಣನು ವಾಸುಕಿಗೆ ಆ ಸತ್ತ ಹುಡುಗರನ್ನು ಬದುಕಿಸಲು ಹೇಳುತ್ತಾನೆ. ಈ ರೀತಿ ಪುನಃ ಅಣ್ಣಂದಿರ ಜೀವವನ್ನು ಮರಳಿ ಪಡೆದುಕೊಳ್ಳುವಲ್ಲಿ ಆ ಕನ್ನಿಕೆ ಯಶಸ್ವಿಯಾದ ದಿನವೇ ನಾಗರ ಪಂಚಮಿ.

**ಹೆಣ್ಣುಮಕ್ಕಳಹಬ್ಬ:**

ನಾಗರಪಂಚಮಿ ಹೆಚ್ಚಾಗಿ ಹೆಣ್ಣು ಮಕ್ಕಳ ಹಬ್ಬ. ನಾಗರಪಂಚಮಿಯ ಹಿಂದಿನ ದಿನ ಸಹೋದರಿ ನಾಗದೇವತೆಗೆ ಬೇಡಿಕೊಂಡರೆ ಸಹೋದರನಿಗೆ ಲಾಭ ಹಾಗೂ ರಕ್ಷಣೆ ಸಿಗುತ್ತದೆ. ನಾಗರಪಂಚಮಿ ಮಾಂಗಲ್ಯಪ್ರದ ಹಾಗೂ ಸಂತಾನಪ್ರದ ಎಂಬ ನಂಬಿಕೆ. ಉತ್ತರ ಕರ್ನಾಟಕದಲ್ಲಿ ನಾಗರಪಂಚಮಿ ವಿಶೇಷತೆಗಳಿಂದ ಕೂಡಿರುತ್ತದೆ. `ನಾಗರ ಪಂಚಮಿ ಬಂತು, ಅಣ್ಣ ಬರುತ್ತಾನೆ ಕರೆಯಾಕ, ಕರಿ ಸೀರೆ ಉಡಿಸಾಕ' ಎನ್ನುವ ಜಾನಪದ ಹಾಡು ಹಬ್ಬದ ವಿಶೇಷತೆ ಸಾರುತ್ತದೆ. ತವರಿಗೆ ಹೆಣ್ಣುಮಕ್ಕಳನ್ನು ಆಹ್ವಾನಿಸಿ, ಉಡುಗೊರೆ ನೀಡಿ ಗೌರವಿಸಲಾಗುತ್ತದೆ.

ನಮ್ಮ ಪೂರ್ವಜರ ಕಾಲದಿಂದಲೂ ನಾಗಪೂಜೆ ನಡೆದುಕೊಂಡು ಬಂದ ಸಂಪ್ರದಾಯವಾಗಿದೆ. ಸಿಂಧೂ ಸಂಸ್ಕೃತಿಯ ಉತ್ಕನನ ತಾಣಗಳಲ್ಲಿ ಸಿಕ್ಕಿರುವ ಅನೇಕ ಅವಶೇಷಗಳು ಅಲ್ಲಿನ ಜನರು ನಾಗ (ಸರ್ಪ) ಪೂಜೆ ಮಾಡುತ್ತಿದ್ದರು ಎನ್ನುವುದು ತಿಳಿದುಬರುತ್ತದೆ. ಅವರ ನಂತರ ಬಂದಿರುವ ಅನೇಕ ರಾಜಮನೆತನಗಳು ಸರ್ಪವನ್ನು ವಿಶೇಷವಾಗಿ ಪೂಜಿಸುತ್ತಿದ್ದರು. ಈ ಬಗ್ಗೆ ಇತಿಹಾಸದ ಪುಟಗಳಲ್ಲಿ ಉಲ್ಲೇಖವಿದೆ. ಮಾನವ ಜನಾಂಗದವರು ಆದಿಕಾಲದಿಂದಲೂ ಈ ನಾಗಾರಾಧನೆ ನಡೆಸಿಕೊಂಡು ಬಂದಿದ್ದರು ತಿಳಿದುಬರುತ್ತದೆ.

## ❖ ನಾಗ ಪಂಚಮಿಯ ವಿಶೇಷ ಗೀತೆ

ಪಂಚಮಿ ಹಬ್ಬ!! ಉಳಿದಾವ ದಿನ
ನಾಕ, ಅಣ್ಣ ಬರಲಿಲ್ಲ ಯಾಕ ಕರಿಲಾಕ
ನನ್ನ ತವರೂರು ಗೋಕುಲ ನಗರ
ನನ್ನ ಅಣ್ಣಯ್ಯ ದೊಡ್ಡ ಸಾಹುಕಾರ
ಮನಿ ಎಂಥದ್ದು ರಾಜಮಂದಿರ
ಹ್ಯಾಂಗ ಆದೀತ ಬಿಟ್ಟು ಇರಲಾಕ




ಸಂಜನಾ ಡಿ ಬಿ ಮತ್ತು ಸಂಗಡಿಗರು

- ನಾಗದೇವನನ್ನು ಆಭರಣವಾಗಿ ಧರಿಸಿದ ಶಿವನ ನೃತ್ಯ

ನಾಗದೇವನು ಭೂಮಿಯನ್ನು ಹೊತ್ತ ಆದಿಶೇಷನಾಗಿ ಪಾರ್ಶ್ವನಾಥ ತೀರ್ಥಂಕರನ ಸಿರೋಲಾಂಛನವಾಗಿ ಇತಿಹಾಸದ ಪುರಾಣಗಳಲ್ಲಿ ಮಹತ್ವದ ಸ್ಥಾನ ಪಡೆದ ನಾಗದೇವನನ್ನು ಆಭರಣವಾಗಿ ಧರಿಸಿದ ಶಿವನ ಮಹತ್ವ ನೃತ್ಯ



ಕೃತಿಕಾ ಮತ್ತು ಸಂಗಡಿಗರು **(9ನೆಯ ತರಗತಿ ವಿದ್ಯಾರ್ಥಿನಿಯರು)**

## ❖ ವಂದನಾರ್ಪಣೆ

ವಿಘ್ನೇಶ್ವರನ ಒಡಲಿಗೆ ಕಟ್ಟಾಗಿ ಪರಮೇಶ್ವರನಿಗೆ ಆಭರಣವಾಗಿ ವಿಷ್ಣುವಿಗೆ ಹಾಸಿಗೆಯಾಗಿ ಸಮುದ್ರ ಮಂಥನ ಸಮಯದಲ್ಲಿ ಮಂದಾರ ಪರ್ವತವೆಂಬ ಕಡಗೋಲಿಗೆ ಹಗ್ಗವಾಗಿ ಇದ್ದ ನಾಗದೇವನು ತಮಗೆ ಸುಖ ಶಾಂತಿ ನೀಡಲಿ ಎಂದು ಆಶಿಸುತ್ತಾ ಎಲ್ಲರಿಗೂ ನಾಗರಪಂಚಮಿ ಹಬ್ಬದ ಶುಭಾಶಯಗಳು ಈ ನಾಗ ಪಂಚಮಿಯ ಸಂಭ್ರಮವನ್ನು ಆಚರಿಸಲು ಅವಕಾಶ ಮಾಡಿಕೊಟ್ಟಂತಹ ನಮ್ಮ ಶಾಲೆಯ ಮುಖ್ಯಸ್ಥರಾದ ಶ್ರೀಯುತ ಮಂಜುನಾಥ್ ರಂಗರಾಜು ಸರ್ ಅವರಿಗೆ ಹೃದಯಪೂರ್ವಕ ವಂದನೆಗಳನ್ನು ಸಲ್ಲಿಸುತ್ತೇನೆ

ಎಲ್ಲಾ ವಿಭಾಗದ ಪ್ರಾಂಶುಪಾಲರಿಗೂ ಉಪ ಪ್ರಾಂಶುಪಾಲರಿಗೂ ಮತ್ತು ಸಂಯೋಜಕರಿಗೂ ವಂದನೆಗಳನ್ನು ಸಲ್ಲಿಸುತ್ತೇನೆ.

ಈ ಪ್ರಾರ್ಥನಾ ಸಭೆಗೆ ಸಹಾಯ ಮಾಡಿದಂತಹ ಚಿತ್ರಕಲಾವಿಭಾಗ, ನೃತ್ಯ ವಿಭಾಗ, ಸಂಗೀತ ವಿಭಾಗ, ದೈಹಿಕ ವಿಭಾಗ ಹಾಗೂ ರಂಗು ರಂಗಾದ ರಂಗೋಲಿಯನ್ನು ಹಾಕಿದ ಶಿಕ್ಷಕರಿಗೂ ಮತ್ತು ಕನ್ನಡ ವಿಭಾಗಕ್ಕೂ ವಂದನೆಗಳನ್ನು ಸಲ್ಲಿಸುತ್ತೇನೆ

ಈ ಕಾರ್ಯಕ್ರಮದ ಯಶಸ್ಸಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಾಯ ಮಾಡಿದಂತಹ ಶಿಕ್ಷಕ ಮತ್ತು ಶಿಕ್ಷಕೇತರ ವೃಂದಕ್ಕೂ ಹಾಗೂ ನನ್ನ ಸಹೋದರ ಸಹೋದರಿಯರಿಗೂ ನನ್ನ ಹೃದಯಪೂರ್ವಕ ವಂದನೆಗಳನ್ನು ಹಾಗೂ ನಾಗ ಪಂಚಮಿಯ ಸಂಭ್ರಮದ ಶುಭಾಶಯಗಳನ್ನು ತಿಳಿಸುತ್ತೇನೆ.






ಸುನಿಲ್ ಕುಮಾರ್ **(6ನೆಯ ತರಗತಿ ವಿದ್ಯಾರ್ಥಿ)**

ಪ್ರತಿಜ್ಞಾ ವಿಧಿ ತರುಣ್ ಶಾಫಲೆ **(ಹತ್ತನೆಯ ತರಗತಿ ವಿದ್ಯಾರ್ಥಿ)**




CBSE
NEW DELHI
BAPUJI EDUCATIONAL ASSOCIATION (R)
CAIE
LONDON, UK
PSSEMR SCHOOL & PU COLLEGE
ನಾಗರ ಪಂಚಮಿ














CBSE
NEW DELHI
PSSEMR SCH


PSSEMR